# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 727 (796)
ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 16-12-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಹಿರಿಯ ಪ್ರಾಥಮಿಕ ಪ್ರೌಢ ಶಾಲೆಗಳು ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ನೀಡುವ ಕುರಿತು ಸರ್ಕಾರದ ನಿಲುವೇನು: ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: | **<u>ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ</u>**<br>ರಾಜ್ಯದ ಪ್ರತಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಒಂದು ಶಾಲೆಗೆ ಒಂದರಂತೆ ಮಂಜೂರು ಮಾಡಲಾಗಿದೆ.<br>ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾ ಬಲ ಕನಿಷ್ಟ 200 ಇದ್ದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಮಂಜೂರು ಮಾಡಲಾಗಿದೆ.<br>**<u>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ</u>**<br>ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಒಟ್ಟು 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಂಜೂರಾಗಿರುತ್ತದೆ. ಸದರಿ ಹುದ್ದೆಗಳಲ್ಲಿ 10 ಹುದ್ದೆಗಳು ನೇರ ನೇಮಕಾತಿಗೆ ಮೀಸಲಾಗಿದ್ದು, ಈ ಹುದ್ದೆಗಳ ಭರ್ತಿಗೆ ಕೇಂದ್ರೀಕೃತ ದಾಖಲಾತಿ ಘಟಕದ ವತಿಯಿಂದ ಆಯ್ಕೆ ಪ್ರಕ್ರಿಯೆಗೆ ಕ್ರಮವಹಿಸಲಾಗಿದ್ದು, ಸದರಿ ಘಟಕದ ವತಿಯಿಂದ ಕೆಲವು ಮಾಹಿತಿಗಳನ್ನು ಕೋರಲಾಗಿರುತ್ತದೆ. ಸದರಿ ಮಾಹಿತಿಯನ್ನು ಕೂಡಲೇ ಒದಗಿಸಿ, ಜರೂರಾಗಿ ಆಯ್ಕೆ ಪ್ರಕ್ರಿಯೆ ನಡೆಸಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕಳುಹಿಸುವಂತೆ ಕೋರಲಾಗುವುದು.<br>ಇನ್ನುಳಿದ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಬಡ್ತಿಗೆ ಮೀಸಲಾಗಿದ್ದು, ಶಾಲಾ ಶಿಕ್ಷಣ ಇಲಾಖೆಯ ಪ್ರೌಢಶಾಲಾ ಅರ್ಹ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರಿಗೆ ದಿನಾಂಕ:6/12/2024 ರಂದು ಬಡ್ತಿ ನೀಡಲಾಗಿರುತ್ತದೆ. ಇದರಲ್ಲಿ 6 ಹುದ್ದೆಗಳು ಭರ್ತಿಯಾಗಿದ್ದು, ಬಡ್ತಿ ಮುಂದೂಡಿರುವ ಪ್ರಯುಕ್ತ 4 ಹುದ್ದೆಗಳು ಖಾಲಿ ಉಳಿದಿದ್ದು, ಸದರಿ ಹುದ್ದೆಗಳ ಭರ್ತಿಗಾಗಿ ಸಂಬಂಧಿಸಿದ ನೌಕರರ ಅಗತ್ಯ ದಸ್ತಾವೇಜುಗಳನ್ನು ಸಲ್ಲಿಸುವಂತೆ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರನ್ನು ದಿನಾಂಕ:09/12/2024 ರಂದು ಕೋರಲಾಗಿದೆ. |

| | | |
|---|---|---|
| | | ಇದಲ್ಲದೇ 728 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ, ಕಾಲೇಜಿಗೆ ಒಂದರಂತೆ 728 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿ, ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:FD/637/EXP-8/2022(EXP-8) ದಿನಾಂಕ: 14-06-2023ರಲ್ಲಿ 728 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಲು ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ 120 ವಿದ್ಯಾರ್ಥಿಗಳ ಕಾರ್ಯಭಾರದ ಮಾನದಂಡವನ್ನು 500 ವಿದ್ಯಾರ್ಥಿಗಳಿಗೆ ಹೆಚ್ಚಿಸಲು ನಿರ್ಣಯಿಸುವಂತೆ ಆರ್ಥಿಕ ಇಲಾಖೆಯು ಸಲಹೆ ನೀಡಿದ್ದು, ಈ ಬಗ್ಗೆ ಪರಿಶೀಲನೆಯಲ್ಲಿರುತ್ತದೆ.<br><br>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಲ್ಲಿ ಒಬ್ಬ ಸೂಕ್ತ ಉಪನ್ಯಾಸಕರಿಗೆ ಕ್ರೀಡಾ ಚಟುವಟಿಕೆಗಳನ್ನು, ನಿರ್ವಹಿಸುವಂತೆ ಪ್ರಾರಂಭದಲ್ಲಿಯೇ ನಿಗದಿಪಡಿಸಲಾಗಿರುತ್ತದೆ ಶೈಕ್ಷಣಿಕ ವರ್ಷದ ಕಾರ್ಯವನ್ನು ಮತ್ತು ಹತ್ತಿರದ ಶಾಲಾ/ಕಾಲೇಜುಗಳಲ್ಲಿನ ದೈಹಿಕ ಶಿಕ್ಷಣ ಉಪನ್ಯಾಸಕರಿಂದ ತಾಲ್ಲೂಕು, ಜಿಲ್ಲಾ ಮತ್ತು ವಿವಿಧ ಮಟ್ಟದ ಕ್ರೀಡಾ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಲು ವಿದ್ಯಾರ್ಥಿಗಳಿಗೆ ಸೂಕ್ತ ತರಬೇತಿ ನೀಡಲಾಗುತ್ತದೆ. |
| ಆ) | ಸದರಿ ವಿಷಯವನ್ನು ಬೋಧಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ/ಉಪನ್ಯಾಸಕರ ಸಂಖ್ಯೆ ಎಷ್ಟು; ಅವಶ್ಯಕತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು: | **ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ:-**<br><br>**1.** ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಪ್ರಸ್ತುತ ಮಂಜೂರಾಗಿರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **5220**<br>**2.** ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಪ್ರಸ್ತುತ ಕಾರ್ಯನಿರತ (ಬೋಧಿಸುತ್ತಿರುವ) ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **3433.**<br>**3.** ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಪ್ರಸ್ತುತ ಖಾಲಿಯಿರುವ (ಅವಶ್ಯಕತೆ ಇರುವ) ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **1787**<br><br>**ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:-**<br>**4.** ರಾಜ್ಯದ ಪ್ರಸ್ತುತ ಮಂಜೂರಾಗಿರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **6772**<br>**5.** ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಪ್ರಸ್ತುತ ಕಾರ್ಯನಿರತ (ಬೋಧಿಸುತ್ತಿರುವ) ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **3666.**<br>**6.** ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಪ್ರಸ್ತುತ ಖಾಲಿಯಿರುವ (ಅವಶ್ಯಕತೆ ಇರುವ) ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **3106.**<br><br>**ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ**<br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸ್ತುತ ಮಂಜೂರಾಗಿರುವ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಖ್ಯೆ: **20.** |

| | | |
|---|---|---|
| | | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸ್ತುತ ಕಾರ್ಯನಿರತ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಖ್ಯೆ**: 06.**<br><br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸ್ತುತ ಖಾಲಿಯಿರುವ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಖ್ಯೆ**: 14.**<br><br>ಇದಲ್ಲದೇ 728 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ, ಕಾಲೇಜಿಗೆ ಒಂದರಂತೆ 728 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿ ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:FD/637/EXP-8/2022(EXP-8) ದಿನಾಂಕ: 14-06-2023ರಲ್ಲಿ 728 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಲು ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ 120 ವಿದ್ಯಾರ್ಥಿಗಳ ಕಾರ್ಯಭಾರದ ಮಾನದಂಡವನ್ನು 500 ವಿದ್ಯಾರ್ಥಿಗಳಿಗೆ ಹೆಚ್ಚಿಸಲು ನಿರ್ಣಯಿಸುವಂತೆ ಆರ್ಥಿಕ ಇಲಾಖೆಯು ಸಲಹೆ ನೀಡಿದ್ದು, ಈ ಬಗ್ಗೆ ಪರಿಶೀಲನೆಯಲ್ಲಿರುತ್ತದೆ. |
| ಇ) | ಎಷ್ಟು ವಿದ್ಯಾರ್ಥಿಗಳ ಸಂಖ್ಯೆಗೆ ಒಬ್ಬ ಶಿಕ್ಷಕರ ನೇಮಕಾತಿ ಮಾಡಲಾಗುತ್ತಿದೆ: (ವಿದ್ಯಾರ್ಥಿ ಶಿಕ್ಷಕರ ಅನುಪಾತ) ಒಬ್ಬ ದೈಹಿಕ ಶಿಕ್ಷಕರಿಗೆ 500 ವಿದ್ಯಾರ್ಥಿಗಳ ಅನುಪಾತ ಇರುವುದು ನಿಜವೇ: | **<u>ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ:-</u>**<br><br>ರಾಜ್ಯದ ಪ್ರತೀ ಸರ್ಕಾರಿ ಪೌಢಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಒಂದು ಶಾಲೆಗೆ ಒಂದರಂತೆ ಮಂಜೂರು ಮಾಡಲಾಗಿದೆ. ಪ್ರಸ್ತುತ ಖಾಲಿಯಿರುವ ಹುದ್ದೆಗಳನ್ನು ನೇರ/ಬಡ್ತಿ ಮೂಲಕ ಭರ್ತಿ ಮಾಡಲಾಗುವುದು.<br><br>**<u>ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:-</u>**<br>ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾಬಲ ಕನಿಷ್ಟ 200 ಹಾಗೂ 200ಕ್ಕಿಂತ ಕಡಿಮೆ ಇದ್ದಲ್ಲಿ ಇಳಿಕೆ ಕ್ರಮದಲ್ಲಿ ಮಂಜೂರಾದ ಸಂಖ್ಯೆಯ ಮಿತಿಯೊಳಗೆ ದೈಹಿಕ ಶಿಕ್ಷಕರನ್ನು ಲಭ್ಯಪಡಿಸಲು ಕ್ರಮವಹಿಸಲಾಗಿದೆ.<br><br>**<u>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ</u>**<br>ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳಿಗೆ ಸಂಬಂಧಿಸಿದಂತೆ ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿ ಸೇರಿ ಕನಿಷ್ಠ 120 ವಿದ್ಯಾರ್ಥಿಗಳ ಸಂಖ್ಯಾಬಲದ ಮಾನದಂಡವನ್ನು ಪರಿಗಣಿಸಲಾಗಿದೆ. |

| | | |
|---|---|---|
| | | ಶೈಕ್ಷಣಿಕವಾಗಿ ಹಿಂದುಳಿದ ತಾಲ್ಲೂಕುಗಳಲ್ಲಿ 500ಕ್ಕಿಂತ ಹೆಚ್ಚು ವಿದ್ಯಾರ್ಥಿಗಳ ಸಂಖ್ಯಾಬಲ ಹೊಂದಿರುವ ಮಾನದಂಡದ ಆಧಾರದ ಮೇಲೆ ಈಗಾಗಲೇ 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.<br><br>ಇದಲ್ಲದೆ, 728 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ, ಕಾಲೇಜಿಗೆ ಒಂದರಂತೆ 728 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯು ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿ ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:FD/637/EXP-8/2022(EXP-8) ದಿನಾಂಕ: 14-06-2023ರಲ್ಲಿ 728 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಲು ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ 120 ವಿದ್ಯಾರ್ಥಿಗಳ ಕಾರ್ಯಭಾರದ ಮಾನದಂಡವನ್ನು 500 ವಿದ್ಯಾರ್ಥಿಗಳಿಗೆ ಹೆಚ್ಚಿಸಲು ನಿರ್ಣಯಿಸುವಂತೆ ಆರ್ಥಿಕ ಇಲಾಖೆಯು ಸಲಹೆ ನೀಡಿದ್ದು, ಈ ಬಗ್ಗೆ ಪರಿಶೀಲನೆಯಲ್ಲಿರುತ್ತದೆ. |
| ಈ) | ದೈಹಿಕ ಶಿಕ್ಷಣ ಶಿಕ್ಷಕರ/ಉಪನ್ಯಾಸಕರ ವೃಂದ ಮತ್ತು ನೇಮಕಾತಿ ತಿದ್ದುಪಡಿ ಕಾರ್ಯ ಯಾವ ಹಂತದಲ್ಲಿದೆ: ಯಾವ ಕಾಲಮಿತಿಯೊಳಗೆ ಇದನ್ನು ಪೂರ್ಣಗೊಳಿಸಲಾಗುವುದು? | **ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ**<br><br>ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಯ ತಿದ್ದುಪಡಿ ಸಂಬಂಧ ಪ್ರಸ್ತಾವನೆಯು ಸ್ವೀಕೃತವಾದ್ದು, ಪರಿಶೀಲನೆಯಲ್ಲಿರುತ್ತದೆ.<br><br>**ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ**<br><br>ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯಲ್ಲಿ ಪ್ರಥಮ ಬಾರಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ:DPAR 71 SRE 94, ದಿನಾಂಕ:27-05-1998ರಲ್ಲಿಯೇ ವೃಂದ ಮತ್ತು ನೇಮಕಾತಿ ನಿಯಮಗಳು ರಚನೆಯಾಗಿರುತ್ತದೆ. ತದನಂತರ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 35 ಡಿಜಿಓ 2009 ದಿನಾಂಕ:15-05-2014ರನ್ವಯ ಸಮಗ್ರ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿರುತ್ತದೆ. |

ಸಂಖ್ಯೆ: ಇಪಿ 440 ಡಿಜಿಡಬ್ಲೂ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು